ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	252
ಸದಸ್ಯರ ಹೆಸರು	ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	21–09–2020
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಪ್ರಶ್ನೆ	ಉತ್ತರ
ಅ) 1995ರ ನಂತರ ಪ್ರಾರಂಭವಾದ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ; **ಆ)** ವೇತನಾನುದಾನಕ್ಕೆ ಒಳಪಡಿಸಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ; **ಇ)** ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಅನುದಾನಕ್ಕೆ ಒಳಪಡಿಸಲಾಗುತ್ತಿದೆಯೇ;	ದಿನಾಂಕ :14.01.2020ರಂದು ವಿವಿಧ ಕನ್ನಡ ಮಾಧ್ಯಮ ಶಾಲಾ ವ್ಯವಸ್ಥಾಪಕ ಮಂಡಳಿಗಳ ಪ್ರತಿನಿಧಿಗಳ ಜೊತೆ ನಡೆದ ಸಭೆಯಲ್ಲಿ 1995ರ ನಂತರದಲ್ಲಿ ಪ್ರಾರಂಭವಾದ ಖಾಸಗಿ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ಸಹಾಯಾನುದಾನಕ್ಕೆ ಒಳಪಡಿಸುವ ಕುರಿತಂತೆ ಚರ್ಚಿಸಲಾಗಿದೆ. 1995 ರಿಂದ 2018ರವರೆಗೆ ಸಂಬಂಧಿಸಿದಂತೆ ಪ್ರತಿ 5 ವರ್ಷದ ಬ್ಲಾಕ್ ಅವಧಿಗೆ ಒಟ್ಟು ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಸಂಖ್ಯೆಯನ್ನು ಅವುಗಳ ಹೆಸರಿನೊಂದಿಗೆ ಮತ್ತು ಒಟ್ಟು ಶಿಕ್ಷಕರುಗಳ ಸಂಖ್ಯೆಯನ್ನು ಹಾಗೂ ಅಂದಾಜು ವೆಚ್ಚದ ಮಾಹಿತಿಯನ್ನು ನೀಡಿದ್ದಲ್ಲಿ ಈ ಬೇಡಿಕೆಯ ಕುರಿತಂತೆ ನಿರ್ಣಯಿಸಲು ಸಾಧ್ಯವಾಗುತ್ತದೆ ಎಂದು ಮನಗಂಡು, ಪ್ರತಿ 5 ವರ್ಷಕ್ಕೆ ಸೀಮಿತಗೊಳಿಸಿ ಮಾಹಿತಿಯನ್ನು ಕ್ರೋಢೀಕರಿಸಲು ನಿರ್ಧರಿಸಿದ್ದು, ಅದರಂತೆ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ಕ್ರಮಕೈಗೊಳ್ಳಲಾಗಿದೆ.
ಈ) ಇಲ್ಲವಾದ್ದಲ್ಲಿ, ಇದಕ್ಕೆ ಕಾರಣಗಳೇನು?	ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020 ದಿನಾಂಕ: 10-06-2020. ರಲ್ಲಿ ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಯಾವುದೇ ಕಾರಣಗಳಿಂದ ಖಾಲಿ ಉಂಟಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲವೆಂದು ಹಾಗೂ ಸದರಿ ನಿಯಮವು ಈಗಾಗಲೇ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿಸಿರುವ ಪ್ರಕರಣಗಳಿಗೂ ಸಹ ಅನ್ವಯಿಸತಕ್ಕದೆಂದು ಹಾಗೂ 2020-21ನೇ ಸಾಲಿನಲ್ಲಿ ಯಾವುದೇ ಹೊಸ ಅನುದಾನ ರಹಿತ ವಿದ್ಯಾಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವಂತಿಲ್ಲವೆಂದು ರಾಜ್ಯದಲ್ಲಿ ಆರ್ಥಿಕ ಮಿತವ್ಯಯವನ್ನು ಜಾರಿಗೊಳಿಸಿದೆ.

ಇಡಿ 113 ಪಿಎಂಸಿ 2020

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.